ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	76
ಸದಸ್ಯರ ಹೆಸರು	ಶ್ರೀಮತಿ ಎಸ್. ವೀಣಾ ಅಚ್ಚಯ್ಯ
ಉತ್ತರಿಸಬೇಕಾದ ದಿನಾಂಕ	09-07-2018
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಡಯಾಲಿಸಿಸ್ ಕೇಂದ್ರಗಳ ಸ್ಥಾಪನೆಗೆ ಸರ್ಕಾರ ನಿಗದಿಪಡಿಸಿರುವ ಮಾನದಂಡ ಹಾಗೂ ನಿಯಮಗಳೇನು; (ಪೂರ್ಣ ವಿವರ ನೀಡುವುದು)	ರಾಷ್ಟ್ರೀಯ ಪ್ರಧಾನ ಮಂತ್ರಿ ಡಯಾಲಿಸಿಸ್ ನಿಯಂತ್ರಣಾ ಕಾರ್ಯಕ್ರಮದಡಿಯಲ್ಲಿ ಪ್ರತಿ ಜಿಲ್ಲಾ ಆಸ್ಪತ್ರೆಯಲ್ಲಿ 10 ಡಯಾಲಿಸಿಸ್ ಯಂತ್ರಗಳನ್ನು ಹಾಗೂ ಪ್ರತಿ ತಾಲ್ಲೂಕು ಆಸ್ಪತ್ರೆಯಲ್ಲಿ 2 ಡಯಾಲಿಸಿಸ್ ಯಂತ್ರಗಳನ್ನು ಅಳವಡಿಸುವ ನಿರ್ದೇಶನವಿರುತ್ತದೆ ಹಾಗೂ ಇದೇ ಮಾನದಂಡವಾಗಿರುತ್ತದೆ. ಒಟ್ಟು 3 ಪ್ರಧಾನ ಆಸ್ಪತ್ರೆಗಳು, 20 ಜಿಲ್ಲಾ ಆಸ್ಪತ್ರೆಗಳು ಹಾಗೂ 148 ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯವನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಒದಗಿಸಲು ಕ್ರಮವಹಿಸಲಾಗಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಕೇಂದ್ರಗಳಲ್ಲಿ ಎಲ್ಲಾ ವರ್ಗದವರಿಗೆ ಉಚಿತವಾಗಿ ಡಯಾಲಿಸಿಸ್ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಇಲಾಖಾ ವತಿಯಿಂದ ಡಯಾಲಿಸಿಸ್ ಕೇಂದ್ರ ಸ್ಥಾಪನೆಗೆ ಸ್ಥಳಾವಕಾಶ, ನೀರು ಮತ್ತು ವಿದ್ಯುತ್ ಸೌಲಭ್ಯವನ್ನು ಒದಗಿಸಬೇಕಾಗಿರುತ್ತದೆ. ಡಯಾಲಿಸಿಸ್ ಸೇವೆಯನ್ನು ಒದಗಿಸಲು ಗುರುತಿಸಲಾದ ಸೇವಾದಾರರು ಮಾನವಸಂಪನ್ಮೂಲ, ಡಯಾಲಿಸಿಸ್ ಯಂತ್ರಗಳು, ಆರ್.ಓ ಪ್ಲಾಂಟ್ ಹಾಗೂ ಡಯಾಲಿಸಿಸ್ ಪರಿಕರಗಳನ್ನು ಒದಗಿಸಬೇಕಾಗಿರುತ್ತದೆ.
ಆ	ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ ಎಷ್ಟು; ಹಾಗೂ ಯಾವುವು; ಈ ಕೇಂದ್ರಗಳಿಗೆ ನಿಯೋಜಿಸಿರುವ ಸಿಬ್ಬಂದಿಗಳೆಷ್ಟು;	ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಕೇಂದ್ರಗಳು -3. ಜಿಲ್ಲಾ ಆಸ್ಪತ್ರೆ ಕೊಡಗು, ತಾಲ್ಲೂಕು ಆಸ್ಪತ್ರೆ ಸೋಮವಾರಪೇಟೆ, ತಾಲ್ಲೂಕು ಆಸ್ಪತ್ರೆ ವಿರಾಜಪೇಟೆ. ಸದರಿ ಕೇಂದ್ರಗಳಿಗೆ ಇಲಾಖಾ ವತಿಯಿಂದ ಸಿಬ್ಬಂದಿಗಳನ್ನು ನಿಯೋಜಿಸಿರುವುದಿಲ್ಲ. ಸಾರ್ವಜನಿಕ - ಖಾಸಗಿ ಸಹಭಾಗಿತ್ವದಲ್ಲಿ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.
ಇ	ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳ ಪ್ರಕಾರ ಜನಸಂಖ್ಯೆಗೆ ಅನುಗುಣವಾಗಿ ಕೊಡಗು ಜಿಲ್ಲೆಯಲ್ಲಿ ಡಯಾಲಿಸಿಸ್ ಕೇಂದ್ರಗಳು ಸ್ಥಾಪನೆಯಾಗಿವೆಯೇ; ಹಾಗೂ ಅವು ಕಾರ್ಯನಿರ್ವಹಿಸುತ್ತಿವೆಯೇ;	ಹೌದು
ಈ	ಕೊಡಗು ಜಿಲ್ಲೆಯಲ್ಲಿ ಜನಸಂಖ್ಯೆಗನುಗುಣವಾಗಿ ಸದರಿ ಕೇಂದ್ರಗಳ ಸ್ಥಾಪನೆಯಾಗದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸ್ಥಾಪಿಸಲಾಗುವುದು;	ಉದ್ಭವಿಸುವುದಿಲ್ಲ

ಕಡತ ಸಂಖ್ಯೆ: ಆಕುಕ 32 ಎಸ್‌ಟಿಕ್ಯೂ 2018

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು